# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162 (ಹೊಸ ಸಂಖ್ಯೆ: 214) ಗಿರಿನಗರ, ಬೆಂಗಳೂರು.

### ಡಿಸೆಂಬರ್ 2022 : ವಾರ್ಡ್ ಸಮಿತಿಯ 2ನೇ ಸಭೆಯ ನಡವಳಿಗಳು

***********

ಉಲ್ಲೇಖ : ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/ 2020-21, ದಿನಾಂಕ: 22-09-2021.

******

ದಿನಾಂಕ : 20-12-2022
ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕಾನಂದ ಉದ್ಯಾನವನ, ಗಿರಿನಗರ
ಸಮಯ : ಪೂರ್ವಾಹ್ನ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಸುನಿಲ್‌ಕುಮಾರ್.ಪಿ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ರಮೇಶ್ .ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ |
| 3 | ಶ್ರೀಮತಿ ಕುಮುದ | ಕಿರಿಯ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 4 | ಶ್ರೀ ಲಕ್ಷ್ಮಿದೇವಿ | ಕಿರಿಯ ಅಭಿಯಂತರರು (ಬೆಸ್ಕಾಂ) |
| 5 | ಶ್ರೀಮತಿ ಉಷಾ | ಕಿರಿಯ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 6 | ಶ್ರೀ ದೇವರಾಜ ಅರಸ್ | ಗಿರಿನಗರ ಪೋಲೀಸ್ ಠಾಣೆ ಸಿಬ್ಬಂದಿ |
| 7 | ಶ್ರೀ ಅಭಿ | ಬೀದಿ ದೀಪ ನಿರ್ವಾಹಕರು |
| 8 | ಶ್ರೀ ಪ್ರಸಾದ್ | ಸಾರ್ವಜನಿಕರು |
| 9 | ಶ್ರೀ ಸತೀಶ್ | ಸಾರ್ವಜನಿಕರು |
| 10 | ಹೆಚ್.ಆರ್. ಆನಂದ ಕೃಷ್ಣ | ಸಾರ್ವಜನಿಕರು |
| 11 | ಶ್ರೀ ವಾಸುದೇವ ಮೂರ್ತಿ | ಸಾರ್ವಜನಿಕರು |
| 12 | ಶ್ರೀ ಪ್ರಸನ್ನ | ಸಾರ್ವಜನಿಕರು |
| 13 | ಶ್ರೀ ಎಲ್. ಜೀವನ್ | ಸಾರ್ವಜನಿಕರು |

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಹಾಜರಿದ್ದ ಸದಸ್ಯರೆಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಿಂದಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ವಾರ್ಡ್ ವ್ಯಾಪ್ತಿಯಲ್ಲಿ ಪಾಲಿಕೆ ವತಿಯಿಂದ ನಡೆಯುತ್ತಿರುವ ಕಾಮಗಾರಿಗಳಿಗೆ ನಾಮಫಲಕಗಳನ್ನು ಅಳವಡಿಸಲು ಹಿಂದಿನ ಸಭೆಯಲ್ಲಿ ತಿಳಿಸಿದ್ದರೂ ಕೂಡ ಇನ್ನೂ ಅಳವಡಿಸದಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ ಜರೂರಾಗಿ ಕ್ರಮ ತೆಗೆದುಕೊಳ್ಳಲು ಅಧ್ಯಕ್ಷರು ತಿಳಿಸಿದರು.

2. ರಸ್ತೆಯಲ್ಲಿನ ಒಳಚರಂಡಿ ಮ್ಯಾನ್‌ಹೋಲ್‌ಗಳನ್ನು ರಸ್ತೆಯ ಸಮಕ್ಕೆ ನಿರ್ಮಿಸಲು ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿದರು.

3. ವಾರ್ಡ್ ವ್ಯಾಪ್ತಿಯ ಬಿ.ಎಸ್.ಕೆ 3ನೇ ಹಂತ, ಶ್ರೀವಿದ್ಯಾನಗರ ರಾಜಕಾಲುವೆಗೆ ಚೈನ್‌ಲಿಂಕ್, ಫೆನ್ಸಿಂಗ್ ಅಳವಡಿಸಲು ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿ ವಾರ್ಡ್ ಸಮಿತಿ ಸಭೆಗೆ ಸಲ್ಲಿಸಲು ಸಭೆಯಲ್ಲಿ ಹಾಜರಿದ್ದ ಬೃಹತ್ ನೀರುಗಾಲುವೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿದರು.

4. ಗಿರಿನಗರ ವಾರ್ಡ್ ವ್ಯಾಪ್ತಿಯಲ್ಲಿ ಬೃಹತ್ ನೀರುಗಾಲುವೆ ವತಿಯಿಂದ ಬಿ.ಎಸ್.ಕೆ 3ನೇ ಹಂತ, 7ನೇ ಬ್ಲಾಕ್‌ನಲ್ಲಿ ನಿರ್ವಹಿಸುತ್ತಿರುವ ಕಾಮಗಾರಿಯ ಬಗ್ಗೆ ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಪೂರ್ಣ ಮಾಹಿತಿಯನ್ನು ಹಾಜರುಪಡಿಸಲು ಬೃಹತ್ ನೀರುಗಾಲುವೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿದರು.

5. ಗಿರಿನಗರ 1ನೇ 'ಇ' ಮುಖ್ಯರಸ್ತೆ ಸಮೀಪ ಬೇಕರಿ ಎದುರು ಪಾದಚಾರಿ ಮಾರ್ಗದಲ್ಲಿಯೇ ಹಾಕಿರುವ ಕೊಡೆಯನ್ನು ತೆರವುಗೊಳಿಸಲು ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿದರು.

6. ಬಿ.ಎಸ್.ಕೆ 3ನೇ ಹಂತ, 7ನೇ ಬ್ಲಾಕ್‌ನಲ್ಲಿ ಸಮರ್ಪಕವಾಗಿ ಕಸ ಸಂಗ್ರಹಣಾ ಕಾರ್ಯವನ್ನು ನಿರ್ವಹಿಸುತ್ತಿಲ್ಲದಿರುವ ಬಗ್ಗೆ ಸಭೆಯಲ್ಲಿ ಸಾರ್ವಜನಿಕರು ದೂರು ನೀಡಿದ್ದು, ಕೂಡಲೇ ಕ್ರಮವಹಿಸಲು ಸಭೆಯಲ್ಲಿ ಹಾಜರಿದ್ದ ಘನತ್ಯಾಜ್ಯ ನಿರ್ವಹಣೆ ಸೂಪರ್‌ವೈಸರ್ ರವರಿಗೆ ಅಧ್ಯಕ್ಷರು ತಿಳಿಸಿದರು.

7. ಬಿ.ಎಸ್.ಕೆ 3ನೇ ಹಂತ, 7ನೇ ಬ್ಲಾಕ್, 1ನೇ ಎ ಮುಖ್ಯರಸ್ತೆ, ಸ್ವತ್ತಿನ ಸಂಖ್ಯೆ: 642 ಮತ್ತು 798ರ ಮುಂಭಾಗದಲ್ಲಿ ಕುಡಿಯುವ ನೀರು ಸೋರಿಕೆಯನ್ನು ಸರಿಪಡಿಸಲು ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ 'ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿದರು.

8. ಗಿರಿನಗರ 2ನೇ ಫೇಸ್, 10ನೇ ಅಡ್ಡರಸ್ತೆ ಮತ್ತು 11ನೇ ಅಡ್ಡರಸ್ತೆಯಲ್ಲಿ ಒಳಚರಂಡಿ ಕೊಳವೆ ಬದಲಾಯಿಸಲು ಅಗೆದಿರುವ ರಸ್ತೆಯ ಭಾಗವನ್ನು ಕೂಡಲೇ ದುರಸ್ಥಿಗೊಳಿಸುವ ಕಾಮಗಾರಿ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿದರು.

9. ಎಸ್.ಬಿ.ಎಂ ಕಾಲೋನಿ ಮಂಜುನಾಥ ಸ್ವಾಮಿ ದೇವಾಲಯದ ರಸ್ತೆಯ ಅಂಚೆ ಕಛೇರಿ ಬಳಿ ಕುಡಿಯುವ ನೀರು ಸೋರಿಕೆಯನ್ನು ಸರಿಪಡಿಸಲು ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ಅಧ್ಯಕ್ಷರು ತಿಳಿಸಿದರು.

10. ಎಸ್.ಬಿ.ಎಂ ಕಾಲೋನಿ 7ನೇ ಅಡ್ಡರಸ್ತೆಯಲ್ಲಿ ಬೀದಿ ನಾಯಿಗಳ ಕಾಟ ಜಾಸ್ತಿಯಾಗಿರುವುದರಿಂದ ಪಾಲಿಕೆಯ ಪಶು ಸಂಗೋಪನಾ ಇಲಾಖೆಯ ಪರಿವೀಕ್ಷಕರಿಗೆ ಕ್ರಮವಹಿಸಲು ತಿಳಿಸಲು ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿದರು.

11. ವಾರ್ಡ್ ಸಮಿತಿ ಸಭೆಗೆ ನಿಗಧಿತ ಸಮಯಕ್ಕೆ ಹಾಜರಾಗಲು ಹಾಗೂ ಹಿಂದಿನ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಿದ ವಿಷಯಗಳಿಗೆ ಸಂಬಂಧಿಸಿದಂತೆ ಅನುಪಾಲನಾ ವರದಿಯನ್ನು ಸಲ್ಲಿಸಲು ವಾರ್ಡ್ ಸಮಿತಿಯ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೂ ತಿಳುವಳಿಕೆ ಪತ್ರ ಜಾರಿ ಮಾಡಲು ವಾರ್ಡ್ ಸದಸ್ಯ ಕಾರ್ಯದರ್ಶಿ ರವರಿಗೆ ಸಭೆಯಲ್ಲಿ ಅಧ್ಯಕ್ಷರು ಸೂಚಿಸಿದರು.

12. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 2023-24ನೇ ಸಾಲಿನ ಆಯವ್ಯಯ ತಯಾರಿಸುತ್ತಿರುವ ಬಗ್ಗೆ ಸಾರ್ವಜನಿಕರಿಗೆ ತಿಳಿಸಿ, ಅವರುಗಳ ಸಲಹೆಗಳನ್ನು ಪಾಲಿಕೆಗೆ ಸಲ್ಲಿಸಲು ಕೋರಲಾಯಿತು ಮತ್ತು ಸಂಬಂಧಿಸಿದ ನಾಗರಿಕರ ಸಲಹೆ ಸ್ವೀಕೃತಿಯ ಪ್ರತಿಗಳನ್ನು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರಿಗೆ ನೀಡಲಾಯಿತು.

13. ಬೆಂಗಳೂರು "ಹವಾಮಾನ ಕ್ರಿಯಾಯೋಜನೆ ಮತ್ತು ಚೇತರಿಕೆಯೋಜನೆ" ಬಗ್ಗೆ ಸಾರ್ವಜನಿಕರಿಗೆ ತಿಳಿಸಿ ಸಂಬಂಧಿಸಿದ Format ನ ಪ್ರತಿಗಳನ್ನು ಹಂಚಲಾಯಿತು ಹಾಗೂ ಇದರಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು ಕೋರಲಾಯಿತು.

14. ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಬಿ.ಎಸ್.ಕೆ 3ನೇ ಹಂತ, 1ನೇ ಬ್ಲಾಕ್‌ನಲ್ಲಿನ ಮಂಕುತಿಮ್ಮನ ಉದ್ಯಾನವನಕ್ಕೆ ಹೊಂದಿಕೊಂಡಂತೆ ಇರುವ ಸಿ.ಎ ನಿವೇಶನವನ್ನು ಸ್ವಚ್ಛಗೊಳಿಸಲು ಕೋರಿರುತ್ತಾರೆ. ಆದರೆ, ಸದರಿ ಸಿ.ಎ. ನಿವೇಶನವು ಪ್ರಸ್ತುತ ಕತ್ರಿಗುಪ್ಪೆ ವಾರ್ಡ್-215ಕ್ಕೆ ಒಳಪಟ್ಟಿದ್ದು, ಸದರಿ ವಿಷಯದ ಬಗ್ಗೆ ಕ್ರಮಕೈಗೊಳ್ಳಲು ಗಿರಿನಗರ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ತಿಳಿಸಲು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿ ರವರಿಗೆ ಅಧ್ಯಕ್ಷರು ಸೂಚಿಸಿದರು..

"ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು".

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 162, ಗಿರಿನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 162, ಗಿರಿನಗರ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ವಲಯ ಆಯುಕ್ತರು ( ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಸವನಗುಡಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಸವನಗುಡಿ ರವರ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.